**ಕರ್ನಾಟಕ ವಿಧಾನಪರಿಷತ್ತು**

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: : 1330
ಸದಸ್ಯರ ಹೆಸರು : ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 21-12-2018
ಉತ್ತರಿಸುವ ಸಚಿವರು : ಲೋಕೋಪಯೋಗಿ ಸಚಿವರು

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ರಾಷ್ಟ್ರೀಯ ಹೆದ್ದಾರಿ 4 ಕ್ಕೆ ಸೇರಿದಂತೆ ತುಮಕೂರು ನಗರದ ಕ್ಯಾತಸಂದ್ರ ಬಳಿ ಸಾರ್ವಜನಿಕರು ರಸ್ತೆ ದಾಟಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ರಾಷ್ಟ್ರೀಯ ಹೆದ್ದಾರಿ-48 (ಹಳೇ ರಾ.ಹೆ.4) ನೆಲಮಂಗಲದಿಂದ ತುಮಕೂರು ವರೆಗೆ ಹಾಲಿ ಇರುವ 4 ಪಥದ ರಸ್ತೆಯನ್ನು 6 ಪಥದ ರಸ್ತೆಯನ್ನಾಗಿ ಅಗಲೀಕರಿಸುವ ಕಾಮಗಾರಿಯ (ಬಿ.ಓ.ಟಿ ಯೋಜನೆ) ವಿಸ್ತೃತ ಯೋಜನಾ ವರದಿ ತಯಾರಿಕೆಯಲ್ಲಿ ಕೆಲವೊಂದು ಅಭಿವೃದ್ಧಿ ಕಾರ್ಯಗಳನ್ನು ಈಗಾಗಲೇ ಅಳವಡಿಸಿಕೊಂಡಿದ್ದು, ಪ್ರಸ್ತುತ ಇರುವ ತುಮಕೂರು ಬೈಪಾಸ್‌ನ ವಿಸ್ತೃತ ಯೋಜನಾ ವರದಿಯಲ್ಲಿ ಕ್ಯಾತ್ಸಂದ್ರ ಜಂಕ್ಷನ್ ಬಳಿಯ ಮೇಲು ಸೇತುವೆಯ ಪ್ರಸ್ತಾವನೆಯನ್ನೊಳಗೊಂಡಂತೆ ಕೆಲವೊಂದು ಅಭಿವೃದ್ಧಿ ಅಂಶಗಳನ್ನು ಗಮನದಲ್ಲಿಟ್ಟುಕೊಳ್ಳಲಾಗಿರುತ್ತದೆ. ವಿಸ್ತೃತ ಯೋಜನಾ ವರದಿ ತಯಾರಿಕೆಯು ಪ್ರಗತಿಯಲ್ಲಿದ್ದು, 6 ಪಥದ ರಸ್ತೆ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆಯು ಕೂಡ ಪ್ರಗತಿಯಲ್ಲಿರುತ್ತದೆ. ಹಾಗೂ ತುಮಕೂರಿನ ಸೂಪರಿಂಟೆಂಡಂಟ್ ಆಫ್ ಪೊಲೀಸ್ ರವರು ಕ್ಯಾತ್ಸಂದ್ರ ಜಂಕ್ಷನ್ ಬಳಿ ವಾಹನ ಸಂಚಾರ ದಟ್ಟಣೆಯನ್ನು ನಿಯಂತ್ರಣ ಮಾಡಲು ಸಿಗ್ನಲೈಸ್ಡ್ ಜಂಕ್ಷನ್ ಅಳವಡಿಸಿರುತ್ತಾರೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ತಿಳಿಸಿರುತ್ತಾರೆ. |
| ಆ | ಈ ಬಗ್ಗೆ ದಿನಾಂಕ:14-11-2017 ರಂದು ವಿಧಾನ ಪರಿಷತ್ತಿನಲ್ಲಿ ಪ್ರಶ್ನೆ ಕೇಳಲಾಗಿ ಈ ಬಗ್ಗೆ ಇನ್ನು ಉತ್ತರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸದರಿ ಪ್ರಶ್ನೆಗೆ ಈಗಾಗಲೇ ಉತ್ತರಿಸಲಾಗಿದ್ದು, ಉತ್ತರದ ಪ್ರತಿಯನ್ನು ಅನುಬಂಧದಲ್ಲಿ ನೀಡಲಾಗಿದೆ. |

..2

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಇ | ರಾಷ್ಟ್ರೀಯ ಹೆದ್ದಾರಿ 4 ಕ್ಕೆ ಹೊಂದಿಕೊಂಡಂತೆ ಶ್ರೀ ಸಿದ್ದಗಂಗಾ ಮಠವಿದ್ದು, ಈ ಮಠಕ್ಕೆ ದೇಶ ವಿದೇಶಗಳಿಂದ ಅತಿ ಗಣ್ಯಾತಿ ಗಣ್ಯ ವ್ಯಕ್ತಿಗಳು ಭೇಟಿ ನೀಡುತ್ತಿದ್ದು, ಮಠಕ್ಕೆ ಹೋಗಲು ಕ್ಯಾತಸಂದ್ರ ಜಂಕ್ಷನ್‌ನಲ್ಲಿ ರಸ್ತೆ ದಾಟುವುದು ಕಷ್ಟಕರವಾಗಿರುವುದರಿಂದ ಮಠಕ್ಕೆ ಸಂಪರ್ಕ ನೀಡುವ 2ನೇ ಮಾರ್ಗದ ರೀತಿಯ ಮೇಲು ಸೇತುವೆ (ಫ್ಲೈಓವರ್) ನಿರ್ಮಾಣ ಮಾಡಲು ಸರ್ಕಾರ ಕೂಡಲೇ ಕ್ರಮ ತೆಗೆದುಕೊಳ್ಳುವುದೇ: | ರಾಷ್ಟ್ರೀಯ ಹೆದ್ದಾರಿ 4 ಕ್ಕೆ ಹೊಂದಿಕೊಂಡಂತೆ ಶ್ರೀ ಸಿದ್ದಗಂಗಾ ಮಠಕ್ಕೆ ಹೋಗಲು ಕ್ಯಾತಸಂದ್ರ ಜಂಕ್ಷನ್‌ನಲ್ಲಿ ರಸ್ತೆ ದಾಟುವುದು ಕಷ್ಟಕರವಾಗಿರುವುದರಿಂದ ಮಠಕ್ಕೆ ಸಂಪರ್ಕ ನೀಡುವ 2ನೇ ಮಾರ್ಗದ ರೀತಿಯ ಕ್ಯಾತ್ಸಂದ್ರ ಜಂಕ್ಷನ್ ಬಳಿಯ ಮೇಲು ಸೇತುವೆಯ ಪ್ರಸ್ತಾವನೆಯನ್ನು ಪ್ರಸ್ತುತ ತಯಾರಿಸುತ್ತಿರುವ ವಿಸ್ತೃತ ಯೋಜನಾ ವರದಿಯಲ್ಲಿ ಅಳವಡಿಸಲಾಗಿದ್ದು, ಡಿಪಿಆರ್ ಸಮಾಲೋಚಕರು ಅಂತಿಮ ಕಾರ್ಯಸಾಧನ ವರದಿಯನ್ನು ಜೂನ್ 2019ಕ್ಕೆ ಸಲ್ಲಿಸುವ ಸಾಧ್ಯತೆ ಇರುತ್ತದೆ. ಅಂತಿಮ ವಿಸ್ತೃತ ಯೋಜನಾ ವರದಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿ, ಅನುಮೋದನೆ ಪಡೆದು ಕ್ಯಾತಸಂದ್ರ ಜಂಕ್ಷನ್ ಬಳಿಯ ಮೇಲು ಸೇತುವೆ ಕಾಮಗಾರಿಯನ್ನು ಪ್ರಾರಂಭಿಸಲಾಗುವುದೆಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿ ಮಾಡಿರುತ್ತಾರೆ. |
| ಈ | ಕಳೆದ ಹತ್ತಾರು ವರ್ಷಗಳಿಂದ ಈ ಕ್ಯಾತಸಂದ್ರ ಜಂಕ್ಷನ್‌ನಲ್ಲಿ ಹಲವಾರು ಅಪಘಾತಗಳು ನಡೆದು ಸಾರ್ವಜನಿಕರು ಪ್ರಾಣ ಕಳೆದುಕೊಂಡಿರುವ ಉದಾಹರಣೆ ಇರುವುದರಿಂದ ಈ ಬಗ್ಗೆ ತಕ್ಷಣ ಒಂದು ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಿ ಕೂಡಲೇ ಕಾಮಗಾರಿ ಪ್ರಾರಂಭಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ? | |

ಸಂಖ್ಯೆ: ಲೋಇ 410 ಸಿಎನ್‌ಹೆಚ್ 2018

(ಹೆಚ್.ಡಿ.ರೇವಣ್ಣ)
ಲೋಕೋಪಯೋಗಿ ಸಚಿವರು